# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.

ಸಂಖ್ಯೆ: ಸ.ಅ/ವಾ-164//2021-22 ದಿನಾಂಕ: 07-01-2022

### ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 05-01-2022 ಗುರುವಾರ ವಾರ್ಡ್ ಸಂಖ್ಯೆ: 164, ವಿದ್ಯಾಪೀಠದ ವಾರ್ಡ್ ಕಛೇರಿಯಲ್ಲಿ ನಡೆದ ಜನವರಿ ತಿಂಗಳ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ : ಬಿಬಿಎಂಪಿ ವಾರ್ಡ್ ಕಛೇರಿ, ವಿದ್ಯಾಪೀಠ ಸರ್ಕಲ್ ಹತ್ತಿರ
ಸಮಯ : ಪೂರ್ವಾಹ್ನ 11.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ವಿಜಯ್‌ಕುಮಾರ್ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 3 | ಶ್ರೀ ಕೃಷ್ಣಮೂರ್ತಿ.ಟಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-164, ವಿದ್ಯಾಪೀಠ |
| 4 | ಡಾ॥ ಸುರ್ಜಿತ್ | ವೈದ್ಯಾಧಿಕಾರಿ (ಸಿ.ಟಿ ಬೆಡ್ ಆರೋಗ್ಯ ಕೇಂದ್ರ) |
| 5 | ಶ್ರೀ ವಿಷಕಂಠಯ್ಯ ಹೆಚ್.ಎನ್ | ಕೆಲಸ ಪರಿವೀಕ್ಷಕರು, ವಾರ್ಡ್-164, ವಿದ್ಯಾಪೀಠ |
| 6 | ಶ್ರೀ ಎಂ. ಸುರೇಶ್ | ಕಂದಾಯ ವಸೂಲಿಗಾರರು, ವಾರ್ಡ್ ನಂ. 164 |
| 7 | ಶ್ರೀ ಸುನಿಲ್ | ಹಿರಿಯ ಆರೋಗ್ಯ ಪರಿವೀಕ್ಷಕರು (ಬಸವನಗುಡಿ ವಲಯ) |
| 8 | ಶ್ರೀ ಕುಮಾರ್ | ಸಾರ್ವಜನಿಕರು |
| 9 | ಶ್ರೀ ಜಯರಾಮೇ ಗೌಡ | ಸ್ಯಾನಿಟರಿ ಧಫೇದಾರ್ |
| 10 | ಶ್ರೀ ಮಹೇಶ್ .ಬಿ | ಮಾರ್ಷಲ್ |
| 11 | ಶ್ರೀ ಯತಿರಾಜ್ | ವಾರ್ಡ್ ಘ.ತ್ಯಾ.ನಿ ಸೂಪರ್‌ವೈಸರ್ |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು. ಸಭೆಯಲ್ಲಿ ಡಿಸಂಬರ್ ತಿಂಗಳ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಾರ್ಡ್ ಅಭಿಯಂತರರು ವರದಿಯನ್ನು ಓದಿ ತಿಳಿಸಿದರು.

ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ ಸುನಿಲ್ ರವರು ಸಭೆಗೆ ವರದಿ ನಿಡುತ್ತಾ ಎಪ್ರಿಲ್ 2020 ರಿಂದ ಈವರೆವಿಗೂ ಘನತ್ಯಾಜ್ಯ ನಿರ್ವಹಣೆ ಕೆಲಸದ ಬಿಲ್ಲುಗಳು ಪಾವತಿಯಾಗಿರುವ ಬಗ್ಗೆ ತಿಳಿಸಿರುತ್ತಾರೆ. ಪಾವತಿಯಾಗಿರುವ ವರದಿಯನ್ನು ನೀಡಲು ಅಧ್ಯಕ್ಷರು ಸದರಿಯವರಿಗೆ ಸೂಚಿಸಿರುತ್ತಾರೆ.

2. ವೈದ್ಯಾಧಿಕಾರಿ (ಸಿ.ಟಿ ಬೆಡ್ ಆರೋಗ್ಯ ಕೇಂದ್ರ) ರವರು ಸಭೆಯಲ್ಲಿ ಹಾಜರಿದ್ದು, ಆರೋಗ್ಯ ಕೇಂದ್ರದಲ್ಲಿ ಪ್ರತಿದಿನವೂ ಸರಿಸುಮಾರು 300 ಜನರಿಗೆ ಬೂಸ್ಟರ್ ಲಸಿಕೆ ಹಾಗೂ 1ನೇ ಮತ್ತು 2ನೇ ಡೋಸ್ ಹಾಕಲಾಗುತ್ತಿದ್ದು, ಯಾವುದೇ ಓಮಿಕ್ರೋನ್ ಪ್ರಕರಣಗಳು ವರದಿಯಾಗಿರುವುದಿಲ್ಲ ಎಂದು ಸಭೆಯಲ್ಲಿ ಹಾಜರಿದ್ದ ವೈದ್ಯಾಧಿಕಾರಿಗಳಿಗೆ ತಿಳಿಸಿರುತ್ತಾರೆ. ಚಿಕ್ಕಮಕ್ಕಳ ಲಸಿಕಾಕರಣವನ್ನು ವಾರದಲ್ಲಿ ಪ್ರತಿ ಮಂಗಳವಾರ ಮತ್ತು ಗುರುವಾರದಂದು ನೀಡಲಾಗುತ್ತಿರುತ್ತದೆ ಹಾಗೂ 15 ರಿಂದ 18 ವರ್ಷದ ಪ್ರಾಯದವರಿಗೆ ಕೋವಿಡ್ ಲಸಿಕೆಯನ್ನು ಪ್ರತಿ ಶನಿವಾರ ನೀಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿರುತ್ತಾರೆ.

3. ಸಭೆಗೆ ಹಾಜರಿದ್ದ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಯಾವ ಅಧಿಕಾರಿ ಹಾಜರಿರುವುದಿಲ್ಲ ಈ ಬಗ್ಗೆ ಸದರಿಯವರಿಗೆ ಮುಂದಿನ ಸಭೆಗೆ ಹಾಜರಿರಲು ಸೂಚಿಸುವಂತೆ ಅಧ್ಯಕ್ಷರು ತಿಳಿಸಿರುತ್ತಾರೆ ಮತ್ತು ವಾರ್ಡ್ ವ್ಯಾಪ್ತಿಯಲ್ಲಿ ಒಳಚರಂಡಿ ವ್ಯವಸ್ಥೆಯ ದುರಸ್ಥಿ ಮಾಡಿ ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ಕ್ರಮಕೈಗೊಳ್ಳಲು ಅಧಿಕಾರಿಗಳಿಗೆ ತಿಳಿಸಲು ಅಧ್ಯಕ್ಷರು ತಿಳಿಸಿರುತ್ತಾರೆ.

4. ಸಭೆಯಲ್ಲಿ ಹಾಜರಿದ್ದ ಕಂದಾಯ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿ ಮತದಾರರ ನೋಂದಣಿ ಅಭಿಯಾನದ ಹಮ್ಮಿಕೊಂಡಿದ್ದು, ಅಭಿಯಾನದಲ್ಲಿ ಹೊಸದಾಗಿ ಸೇರ್ಪಡೆಗೊಳಿಸಲು ಅರ್ಜಿಗಳನ್ನು ಸ್ವೀಕರಿಸಲಾಗುತ್ತದೆ ಹಾಗೂ ಹಾಲಿ ಇರುವ ಮತದಾರರ ವರ್ಗಾವಣೆ ಮತ್ತು ಮರಣ ಹೊಂದಿರುವ ಮತದಾರರನ್ನು ಪಟ್ಟಿಯಿಂದ ತೆಗೆಯುವ ಕಾರ್ಯ ಮಾಡಲಾಗುತ್ತದೆ ಎಂದು ಸಭೆಯಲ್ಲಿ ಕಂದಾಯ ಅಧಿಕಾರಿಗಳು ವರದಿ ನೀಡಿರುತ್ತಾರೆ.

5. ಸಭೆಯಲ್ಲಿ ಹಾಜರಿದ್ದ ಶ್ರೀ ಕುಮಾರ್, ಸಾರ್ವಜನಿಕರು ರವರು ಉದ್ಯಾನವನಗಳ ನಿರ್ವಹಣೆ ಬಗ್ಗೆ ಹಾಗೂ ಬೀದಿ ದೀಪಗಳ ನಿರ್ವಹಣೆ ಬಗ್ಗೆ ಸಂಬಂಧಿಸಿದವರಿಗೆ ತಿಳಿಸಿ ಗಮನ ವಹಿಸಲು ಸಭೆಯಲ್ಲಿ ನೊಡಲ್ ಅಧಿಕಾರಿಗಳಿಗೆ ಸಲಹೆಗಳನ್ನು ನೀಡಿರುತ್ತಾರೆ.

6. ಬೆಂಗಳೂರಿನಲ್ಲಿ ಓಮಿಕ್ರೋನ್ ಹೊಸ ವೈರಸ್ ಪತ್ತೆಯಾಗಿರುವ ಹಿನ್ನೆಲಯಲ್ಲಿ ವಾರ್ಡ್–164ರ ವ್ಯಾಪ್ತಿಯಲ್ಲಿ ಮಾಸ್ಕ್ ಧರಿಸದೆ ಇರುವ ಸಾರ್ವಜನಿಕರಿಗೆ ಎಚ್ಚರಿಕೆ ನೀಡಿ ದಂಡವನ್ನು ವಿಧಿಸಬೇಕೆಂದು ನೊಡಲ್ ಅಧಿಕಾರಿಗಳು ಮಾರ್ಷಲ್‌ಗಳಿಗೆ ಸಭೆಯಲ್ಲಿ ತಿಳಿಸಿರುತ್ತಾರೆ ಹಾಗೂ ರಾತ್ರಿ ಗಸ್ತು ಮಾಡಲು, ರಸ್ತೆ ಬದಿಯಲ್ಲಿ ತಳ್ಳುವ ಗಾಡಿಗಳಿಂದ ಉತ್ಪತ್ತಿಯಾಗುವ ತ್ಯಾಜ್ಯವನ್ನು ತಡೆಗಟ್ಟಲು ಸಭೆಯಲ್ಲಿ ಸೂಚಿಸಲಾಯಿತು.

7. ವಾರ್ಡ್ ವ್ಯಾಪ್ತಿಯ ಕಾಮಗಾರಿಗಳ ಬಗ್ಗೆ ಉಲ್ಲೇಖಿಸುತ್ತಾ ವಾರ್ಡ್ 164 ರಲ್ಲಿನ ರಸ್ತೆ ಗುಂಡಿಗಳ ಬಗ್ಗೆ ಶ್ರೀ ಕುಮಾರ್, ಸಾರ್ವಜನಿಕರು ಮಾತನಾಡಿ ಶೀಘ್ರದಲ್ಲಿ ರಸ್ತೆಗಳಲ್ಲಿರುವ ಗುಂಡಿಗಳನ್ನು ಮುಚ್ಚಿ ನಿರ್ವಹಿಸಲು ತಿಳಿಸಿರುತ್ತಾರೆ. ಸದರಿ ವಿಷಯದ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಹೊಸದಾಗಿ ಗುರ್ತಿಸಲಾದ ರಸ್ತೆ ಗುಂಡಿಗಳನ್ನು ಜಲಮಂಡಳಿ ಹಾಗೂ ಬೆಸ್ಕಾಂ ಹಾಗೂ ಇನ್ನಿತರ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳಿಂದ ಪರಿವೀಕ್ಷಣೆ ಮಾಡಿದ ನಂತರ ರಸ್ತೆ ಗುಂಡಿಗಳನ್ನು ಮುಚ್ಚಲು ಅಗತ್ಯ ಕ್ರಮಗಳನ್ನು ತುರ್ತಾಗಿ ಕೈಗೊಳ್ಳುವಂತೆ ವಾರ್ಡ್ ಅಭಿಯಂತರರಿಗೆ ಅಧ್ಯಕ್ಷರು ಸೂಚಿಸಿರುತ್ತಾರೆ.

ಈ ಬಗ್ಗೆ ವಾರ್ಡ್ ಅಭಿಯಂತರರು ರಸ್ತೆಗುಂಡಿಗಳನ್ನು ಮುಚ್ಚುವ ಕಾಮಗಾರಿಯನ್ನು ಕೈಗೊಳ್ಳಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಶೇ 50% ರಷ್ಟು ರಸ್ತೆಗುಂಡಿಗಳನ್ನು ಮುಚ್ಚಿರುತ್ತಾರೆ ಹಾಗೂ ವಾರ್ಡ್‌ನ ನಿರ್ವಹಣೆಗಾಗಿ ಕಾಮಗಾರಿ ಇಲಾಖೆಗೆ ನೀಡಲಾಗುತ್ತಿರುವ ರೂ: 60.00 ಲಕ್ಷಗಳ ಅನುದಾನದಲ್ಲಿ ಕೈಗೊಳ್ಳಬೇಕಾದ ಚರಂಡಿಗಳ ನಿರ್ವಹಣೆ, ರಸ್ತೆಗುಂಡಿಗಳ ನಿರ್ವಹಣೆ, ಬೋರ್‌ವೆಲ್‌ಗಳ ನಿರ್ವಹಣೆ, ಕಟ್ಟಡಗಳ ನಿರ್ವಹಣೆಯನ್ನು ಕೈಗೆತ್ತಿಕೊಳ್ಳುವ ಬಗ್ಗೆ ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರೊಂದಿಗೆ ಚರ್ಚಿಸಲಾಯಿತು.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಸಭೆಯಲ್ಲಿ ಚರ್ಚಿಸಿದ್ದು, ಈ ವಿಷಯಗಳ ಬಗ್ಗೆ ಮುಂದಿನ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಅಧ್ಯಕ್ಷರು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.